**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ರಾಮೋಜಿ ಗೌಡ ರವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಪ್ರಶ್ನೆಗೆ ಉತ್ತರ**

**ಪ್ರಶ್ನೆ** **ದಿನಾಂಕ:10.03.2025ರ ಪ್ರಜಾಪ್ರಗತಿ ದಿನಪತ್ರಿಕೆಯಲ್ಲಿ ನಮೂದಾಗಿರುವಂತೆ, ಇನ್ನೇನೂ ಕೆಲವೇ ದಿನಗಳಲ್ಲಿ ಐಪಿಎಲ್ ಕ್ರಿಕೆಟ್ ಆರಂಭವಾಗಲಿದ್ದು, ಅದರ ಜೊತೆಗೆ ಬೆಟ್ಟಿಂಗ್ ಭೂತ ಸಹ ತಲೆ ಎತ್ತಲಿರುವುದು ಆತಂಕಕಾರಿ ವಿಷಯ. ಇದರಿಂದ ಅನೇಕರು ತಮ್ಮ ಮನೆ ಮಠಗಳನ್ನು ಕಳೆದುಕೊಂಡು, ಕುಟುಂಬವನ್ನು ಬೀದಿ ಪಾಲು ಮಾಡುವ ಸಂದರ್ಭ ಎದುರಾಗಿದೆ. ಇತ್ತೀಚೆಗೆ ಕೆಲವು ಪುಂಡರು ಟಿಕೆಟ್ ಖರೀದಿಸಿ, ಕ್ರೀಡಾಂಗಣದಲ್ಲಿ ಕುಳಿತು, ಮುಂದೆ ಏನಾಗಲಿದೆ ಎನ್ನುವುದನ್ನು ದೂರವಾಣಿ ಮೂಲಕ ಮಾಹಿತಿ ಕೊಟ್ಟು, ಬೆಟ್ಟಿಂಗ್ ದಂಧೆ ಮಾಡುವುದು ಸರ್ವೇ ಸಾಮಾನ್ಯವಾಗಿಬಿಟ್ಟಿದೆ. ನೇರ ಪ್ರಸಾರದ ಕ್ರಿಕೇಟ್‌ಗೂ ಟಿವಿಯಲ್ಲಿ ಪ್ರಸಾರವಾಗುವುದನ್ನು ಕೆಲವು ಸೆಕೆಂಡ್‌ಗಳ ಅಂತರವಿರುವುದರಿಂದ, ಬೆಟ್ಟಿಂಗ್ ದಂಧೆಕೋರರು ಇದರ ಅವಕಾಶವನ್ನು ಸಂಪೂರ್ಣವಾಗಿ ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಇದರಿಂದ ಹಲವು ಯುವಕರು ಯುವತಿಯರು ತಮ್ಮ ಹಣ, ಆಸ್ತಿ ಕಳೆದುಕೊಂಡು ಕುಟುಂಬವನ್ನು ಬೀದಿಗೆ ತರುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುತ್ತಾರೆ. ಬೆಟ್ಟಿಂಗ್ ಆಡುವಂತಹವರು ಹೆಚ್ಚಾಗಿ ಕಾಲೇಜು ವಿದ್ಯಾರ್ಥಿಗಳು, ಯುವಕರು, ಕೆಲಸ ಮಾಡುವಂತಹವರು ಐಪಿಎಲ್ ಬೆಟ್ಟಿಂಗ್ ಮೋಹಕ್ಕೆ ಬಲಿಯಾಗುತ್ತಿದ್ದಾರೆ. ಇದರಿಂದ ಅನೇಕ ಕುಟುಂಬಗಳು ಅನಾಥವಾಗಿ, ತಮ್ಮ ಮಕ್ಕಳನ್ನು ಕಳೆದುಕೊಳ್ಳುವಂತ ಪ್ರಸಂಗ ಎದುರಾಗಿದೆ. ಇದು ಗ್ರಾಮೀಣ ಭಾಗಕ್ಕೂ ಹಬ್ಬಿ ಕೂಲಿ ನಾಲಿ ಮಾಡಿ ಜೀವನ ನಿರ್ವಹಣೆ ಎದುರಿಸುವ ವಾತಾವರಣ ನಿರ್ಮಾಣವಾಗಿದೆ. ಈ ಬೆಟ್ಟಿಂಗ್ ದಂದೆಯನ್ನು ಹೋಗಲಾಡಿಸಿ, ಯುವಕರ, ಗ್ರಾಮೀಣ ಭಾಗದ ಜನರ ಜೀವನವನ್ನು ಕಾಪಾಡುವ ನಿಟ್ಟಿನಲ್ಲಿ, ಪೊಲೀಸ್ ಇಲಾಖೆ ಎಚ್ಚೆತ್ತುಕೊಂಡು ಬೆಟ್ಟಿಂಗ್ ದಂಧೆಕೋರರ ವಿರುದ್ಧ ಕ್ರಮ ಕೈಗೊಳ್ಳಲು ವಿಶೇಷ ತಂಡ ರಚನೆ ಮಾಡುವ ಸಂಬಂಧದ ಕುರಿತು.**

ಉತ್ತರ ಆನ್ ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗಿಸಿಕೊಂಡವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ. ವರ್ಷವಾರು ವಿವರ ಕೆಳಗಿನಂತಿದೆ:-

| ಕ್ರಸ | ವರ್ಷ | ದಾಖಲಾದ ಪ್ರಕರಣಗಳ ಸಂಖ್ಯೆ |
|---|---|---|
| 1 | 2023 | 492 |
| 2 | 2024 | 382 |
| 3 | 2025 | 23 |
| | **ಒಟ್ಟು** | **897** |

ಯುವಕರುಗಳು ಅನ್‌ಲೈನ್ ಬೆಟ್ಟಿಂಗ್ ಚಟುವಟಿಕೆಗಳಲ್ಲಿ ಭಾಗಿಯಾಗುವಂತೆ ಪ್ರಚೋದನೆ ಮಾಡುತ್ತಿರುವ ಅನ್‌ಲೈನ್ ಬೆಟ್ಟಿಂಗ್ App ಗಳಿಂದ ಪ್ರಚೋದನೆಗೆ ಒಳಪಟ್ಟು ಅಂತಹ ಬೆಟ್ಟಿಂಗ್ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಯುವಕರಲ್ಲಿ, ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ.

ಅಲ್ಲದೆ ಜಿಲ್ಲೆಯ ಹೋಟೇಲ್‌ಗಳಲ್ಲಿ, ಮಾಲ್‌ಗಳಲ್ಲಿ, ಶೋರೂಂ, ಶಾಪ್, ಕ್ಲಬ್ ಹಾಗೂ ಇನ್ನಿತರೆ ಮನೋರಂಜನಾ ಸ್ಥಳಗಳಲ್ಲಿ ಕೆಲಸ ಮಾಡೋ ಯುವಕರುಗಳು ಕ್ರಿಕೆಟ್, ಕಬ್ಬಡಿ ಇನ್ನಿತರೆ ಅನ್‌ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗುತ್ತಿರುವ ಬಗ್ಗೆ ಆಗಿಂದಾಗ್ಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಯಾವುದೇ ಅಕ್ರಮ ಚಟುವಟಿಕೆಗಳು ಕಂಡು ಬಂದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ.

ಆನ್ ಲೈನ್ ಗೇಮ್ಸ್ ಆಮಿಷಕ್ಕೆ ಒಳಗಾಗದಂತೆ ಅರಿವು ಮೂಡಿಸುವ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಯುವಕರಿಗೆ, ಸಭೆ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಅಂತಹ ಆನ್‌ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗಿಕೊಳ್ಳುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದ ಹಲವು ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಮಾಹಿತಿ ಹಾಗೂ ದಾಖಲಾದ ಪ್ರಕರಣಗಳ ಮಾಹಿತಿಯನ್ನು ಹಾಗೂ ಆನ್‌ಲೈನ್ ಗೇಮ್‌ಗಳನ್ನು ನಿರ್ಬಂಧಿಸುವ ಕುರಿತಂತೆ ಕರ್ನಾಟಕ ಪೊಲೀಸ್ ಕಾಯ್ದೆ, 1963ರ ಕಲಂ 78, 79, 80, 87, 114, 128ಎ ಹಾಗೂ 176ಗಳಿಗೆ ಕೆಲವು ತಿದ್ದುಪಡಿ ಮಾಡಲು ತೀರ್ಮಾನಿಸಿ, **The Karnataka Police (Amendment) Act, 2000 (Central Act 21 of 2000)** ರಲ್ಲಿನ ತಾಂತ್ರಿಕ ಅಂಶಗಳನ್ನು ಸೇರ್ಪಡೆಗೊಳಿಸಲಾಗಿತ್ತು. ಈ ಸಂಬಂಧ ಆನ್‌ಲೈನ್ ಗೇಮ್ ಸಂಸ್ಥೆಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ **W.P. No. 18703/2021 (GM-Police)** ದಾಖಲಿಸಲಾಗಿ ಮಾನ್ಯ ಉಚ್ಚ ನ್ಯಾಯಾಲಯವು ಸರ್ಕಾರವು ತಿದ್ದುಪಡಿ ಮಾಡಲಾಗಿದ್ದ ಆದೇಶವನ್ನು ದಿನಾಂಕ: 14.02.2022ರಂದು ರದ್ದುಗೊಳಿಸಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ Civil Appeal No. 6132/2023ನ್ನು ದಾಖಲಿಸಿದ್ದು, ಪ್ರಕರಣವು ಬಾಕಿಯಿರುತ್ತದೆ.

ಘಟಕಗಳಲ್ಲಿ ಹಾಲಿ ಇರುವ ಅಧಿಕಾರಿ / ಸಿಬ್ಬಂದಿ ವರ್ಗವನ್ನು ಸಮರ್ಪಕವಾಗಿ ಬಳಸಿಕೊಂಡು ಹೊಟೇಲ್, ಮಾಲ್, ಶೋರೂಂ, ಶಾಪ್, ಕ್ಲಬ್ ಹಾಗೂ ಇನ್ನಿತರೆ ಮನೋರಂಜನಾ ಸ್ಥಳಗಳಲ್ಲಿ ಆನ್‌ಲೈನ್ ಗೇಮ್‌ನಲ್ಲಿ ತೊಡಗಿರುವ ವಿದ್ಯಾರ್ಥಿಗಳು, ಯುವಕರು ಹಾಗೂ ಇತರೆ ಸಾರ್ವಜನಿಕರನ್ನು ಪತ್ತೆ ಹಚ್ಚಲು ಶ್ರಮವಹಿಸಲಾಗುತ್ತಿದೆ.

ಒಇ 125 ಎಸ್‌ಎಸ್‌ಟಿ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು